## ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾ ಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಹುಣಸೂರು.

**ಸಿ.ಸಿ. ಸಂಖ್ಯೆಃ 518/2019**

ಫಿರ್ಯಾದಿದಾರರುಃ ಸರ್ಕಾರದ ಪರ ಬಿಳಿಕೆರೆ ಪೊಲೀಸ್ ಠಾಣೆ
ಹುಣಸೂರು ವೃತ್ತ, ಹುಣಸೂರು.

ವಿರುದ್ಧ,

ಆರೋಪಿ/ಗಳು ಃ ಎ 1. ಪ್ರಭಾಕರ
ತಂದೆ - ಲೇಟ್ ಸಿದ್ದನಾಯಕ
ಸುಮಾರು 40 ವರ್ಷ ವಯಸ್ಸು,

ಎ 2. ಚೌಡಪ್ಪ @ ಚೌಡನಾಯಕ
ತಂದೆ - ಮಾರನಾಯಕ
ಸುಮಾರು 45 ವರ್ಷ ವಯಸ್ಸು,
ಇಬ್ಬರ ವಾಸಃ ಹೊಸರಾಮೇನಹಳ್ಳಿ ಗ್ರಾಮ,
ಹುಣಸೂರು ತಾಲ್ಲೂಕು, ಮೈಸೂರು ಜಿಲ್ಲೆ.

### ದೋಷಾರೋಪಣೆ

ಶ್ರೀಮತಿ ಪೂಜಾ ಬೆಳಕೇರಿ, ಅಪರ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಹುಣಸೂರು ಆದ ನಾನು ಆರೋಪಿತರಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ

1. ದಿನಾಂಕ 30.04.2018 ರಂದು ರಾತ್ರಿ 11.30 ಗಂಟೆ ಸಮಯದಲ್ಲಿ ಹುಣಸೂರು ತಾಲ್ಲೂಕು ಬಿಳಿಕೆರೆ ಪೊಲೀಸ್ ಠಾಣಾ ಸರಹದ್ದಿಗೆ ಸೇರಿದ ಹೊಸರಾಮೇನಹಳ್ಳಿ ಗ್ರಾಮದ ಕಡೆ ಸಾಕ್ಷಿ - 1 ರಿಂದ 3 ರವರು 2018 ರ ವಿಧಾನ ಸಭಾ ಚುನಾವಣೆಯ ಪ್ರಯುಕ್ತ ರಾತ್ರಿ ಕರ್ತವ್ಯದಲ್ಲಿ ಸರ್ಕಾರಿ ವಾಹನ ಸಂಃ ಕೆಎ-09-ಜಿ-326 ರಲ್ಲಿ ಗಸ್ತು ಮಾಡುತ್ತಿದ್ದಾಗ , ಹೊಸರಾಮೇನಹಳ್ಸಿ ಗ್ರಾಮದ ಸಾಕ್ಷಿ 4 ಅವರ

ತಾಯಿ ಮೃತಪಟ್ಟಿದ್ದು ಸಾಕ್ಷಿ 4 ಅವರು ತಮ್ಮ ಮನೆಯ ಮುಂದೆ ಧ್ವನಿವರ್ಧಕವನ್ನು ಬಳಸಿ ಹರಿಕಥೆ ಮಾಡಿಸುತ್ತಿದ್ದು , ಸಾಕ್ಷಿ 1 ಅವರು ಸಾಕ್ಷಿ 4 ಅವರನ್ನು ಕರೆದು ಚುನಾವಣಾ ಸಮಯದಲ್ಲಿ ಹಾಗೂ ರಾತ್ರಿ ವೇಳೆಯಲ್ಲಿ ಧ್ವನಿವರ್ಧಕ ಬಳಸಬಾರದೆಂದು ತಿಳುವಳಿಕೆ ನೀಡಿದಾಗ ಸಾಕ್ಷಿ 4 ಅವರು ಧ್ವನಿವರ್ಧಕವನ್ನು ನಿಲ್ಲಿಸಿದಾಗ 1ನೇ ಆರೋಪಿಯಾದ ನೀವು ನಿಮ್ಮ ಮನೆಯ ಮುಂಭಾಗ ಸಾಕ್ಷಿ 1 ಅವರಿಗೆ ಇದನ್ನು ಕೇಳಲು ನೀನು ಯಾರು ಎಂದು ಏಕ ವಚನದಲ್ಲಿ ಅವಾಚ್ಯ ಶಬ್ದಗಳಿಂದ ಬೈದಿರುತ್ತೀರೆಂದು ಹಾಗೂ ಅಲ್ಲೇ ಇದ್ದ ಸಾಕ್ಷಿ 5 ಅವರಿಗೂ ಏಕವಚನದಲ್ಲಿ ಅವಾಚ್ಯ ಶಬ್ದಗಳಿಂದ ನಿಂದಿಸಿರುತ್ತೀರೆಂದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 504 ಸಹವಾಚಕ ಕಲಂ 34ರ ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

2. ಕೊನೆಯದಾಗಿ, ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಅದೇ ವಿಚಾರಕ್ಕೆ ಸಂಬಂಧಪಟ್ಟಂತೆ, 1 ಮತ್ತು 2ನೇ ಆರೋಪಿಗಳಾದ ನೀವುಗಳು ಅಪರಾಧ ಎಸಗುವ ಸಮಾನ ಉದ್ದೇಶದಿಂದ, ಸಾಕ್ಷಿ 1 ಅವರು ವೀಡಿಯೋ ಚಿತ್ರೀಕರಣ ಮಾಡುತ್ತಿದ್ದಾಗ 2ನೇ ಆರೋಪಿಯಾದ ನೀವು ವೀಡಿಯೋ ಚಿತ್ರೀಕರಣ ಮಾಡದಂತೆ ಅಡ್ಡಿಪಡಿಸಿ ಏಕವಚನದಲ್ಲಿ ನಿಂದಿಸಿ ಸರ್ಕಾರಿ ಚುನಾವಣಾ ಕರ್ತವ್ಯವನ್ನು ನಿರ್ವಹಿಸದಂತೆ ಅಡ್ಡಿಪಡಿಸಿರುತ್ತೀರೆಂದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 353 ಮತ್ತು 332 ಸಹವಾಚಕ ಕಲಂ 34ರ ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

(ಮೇಲ್ಕಂಡ ಆಪಾದನೆಗಳು ಈ ನ್ಯಾಯಾಲಯದ ಸಂಜ್ಞೆಯೊಳಗೆ ಬರುತ್ತಿದ್ದು ಹಾಗೂ ಸದರಿ ಆಪಾದನೆಗಳಿಗೆ ಆರೋಪಿಗಳಾದ ನೀವುಗಳು ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಗುರಿಯಾಗಬೇಕೆಂದು ಈ ಮೂಲಕ ನಿರ್ದೇಶಿಸುತ್ತೇನೆ.)

**(ಪೂಜಾ ಬೆಳಕೇರಿ)**

ದಿನಾಂಕಃ **27.12.2023**

ಹೆಚ್ಚುವರಿ ದಿವಾಣಿ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು, ಹುಣಸೂರು.

## ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾ ಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಹುಣಸೂರು.

**ಸಿ.ಸಿ. ಸಂಖ್ಯೆ: 518/2019**

ಫಿರ್ಯಾದಿದಾರರು: ಸರ್ಕಾರದ ಪರ ಬಿಳಿಕೆರೆ ಪೊಲೀಸ್ ಠಾಣೆ
ಹುಣಸೂರು ವೃತ್ತ, ಹುಣಸೂರು.

ವಿರುದ್ಧ,

ಆರೋಪಿ/ಗಳು : ಎ 2. ಚೌಡಪ್ಪ @ ಚೌಡನಾಯಕ
ತಂದೆ - ಮಾರನಾಯಕ

ಭಾರತೀಯ ದಂಡ ಸಂಹಿತೆ ಕಲಂ **240(2)** ರ ಅಡಿಯಲ್ಲಿ ಆರೋಪಿಯ ಹೇಳಿಕೆ

ಪ್ರಶ್ನೆ: ನಿಮಗೆ ಈಗ ಓದಿ ಹೇಳಿದ ದೋಷಾರೋಪಣೆ ತಿಳಿಯಿತೆ?

ಉತ್ತರ:

ಪ್ರಶ್ನೆ: ತಪ್ಪೊಪ್ಪಿಕೊಳ್ಳುವಿರೋ, ವಿಚಾರಣೆಯಾಗಬೇಕೆನ್ನುವಿರೋ?

ಉತ್ತರ:

ಮೇಲ್ಕಂಡ ದೋಷಾರೋಪಣೆಯನ್ನು ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿದ್ದು, ಆರೋಪಿಯು ನೀಡಿದ ಉತ್ತರವನ್ನು ಹಾಗೆಯೇ ದಾಖಲಿಸಿಕೊಂಡಿದೆಯೆಂದು ಈ ಮೂಲಕ ದೃಢೀಕರಿಸುತ್ತೇನೆ.

(ಪೂಜಾ ಬೆಳಕೇರಿ)
ದಿನಾಂಕ: **27.12.2023** ಅಪರ ಸಿವಿಲ್ ನ್ಯಾಯಾಧೀಶರು ಹಾಗೂ
ಪ್ರ.ದಂ.ನ್ಯಾ.. ದಂಡಾಧಿಕಾರಿಗಳು, ಹುಣಸೂರು.